ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 1

ಸಂಖ್ಯೆ: ಇ-ಆಡಳಿತ ಶಿಕ್ಷಕರ ಮಾಹಿತಿ 01/2017-18 ದಿನಾಂಕ: **06-06-2017**

**ವಿಶೇಷ ಗಮನಕ್ಕಾಗಿ**

# ಸುತ್ತೋಲೆ

ವಿಷಯ: ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರ ಸೇವಾ ಮಾಹಿತಿಗಳನ್ನು ಮಾಹಿತಿ ಸಂಗ್ರಹಣೆ(**DCF**) ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 05.06.2017 ರಂದು ನಡೆದ ವಿಡಿಯೋ ಕಾನ್ಫರೆನ್ಸ್ ನಲ್ಲಿ ಸೂಚಿಸಿದಂತೆ.

ಉಲ್ಲೇಖಿತ ವಿಡಿಯೋ ಕಾನ್ಫರೆನ್ಸ್ ನಲ್ಲಿ ಸೂಚಿಸಿದಂತೆ, ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರ ಸೇವಾ ಮಾಹಿತಿಗಳನ್ನು ಸಂಬಳ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳು (D.D.O's) ಮುಖ್ಯ ಶಿಕ್ಷಕರು/ಕ್ಷೇತ್ರಶಿಕ್ಷಣಾಧಿಕಾರಿಗಳು ತಂತ್ರಾಂಶದಲ್ಲಿ ಅಳವಡಿಸಲು ಈಗಾಗಲೇ ಸೂಚಿಸಿದ್ದು, ಸದರಿ ಕಾರ್ಯವು ಪ್ರಗತಿಯಲ್ಲಿದೆ.

ಆದರೆ, ಜಿಲ್ಲಾವಾರು ಮಾಹಿತಿಯ ಡೇಟಾ ಎಂಟ್ರಿ ಕಾರ್ಯವನ್ನು ಅವಲೋಕಿಸಿದಾಗ ಜಿಲ್ಲೆಗಳು ಇನ್ನೂ ಹೆಚ್ಚಿನ ಪ್ರಗತಿ ಸಾಧಿಸಬೇಕಾಗಿರುವುದು ಕಂಡು ಬಂದಿರುತ್ತದೆ. **ಈ ನಿಟ್ಟಿನಲ್ಲಿ ವೀಡಿಯೋ ಕಾನ್ಫರೆನ್ಸ್‌ನಲ್ಲಿ ಸೂಚಿಸಿದಂತೆ ಡೇಟಾ ಎಂಟ್ರಿ ಕಾರ್ಯವನ್ನು ರಾತ್ರಿ ಪಾಳಿಯಲ್ಲಿಯೂ ಸಹಾ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಡಿ.ಡಿ.ಓ.ಗಳು ಕೈಗೊಂಡು ದಿನಾಂಕ: 08-06-2017ರ ಸಂಜೆ 5.30ರ ಒಳಗಾಗಿ ಪೂರ್ಣಗೊಳಿಸಲು ಸೂಚಿಸಲಾಗಿದೆ.**

ದಿನಾಂಕ:05-06-2017ರ ವೀಡಿಯೋ ಕಾನ್ಫರೆನ್ಸ್ ನಲ್ಲಿ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಬಂದ ಸಲಹೆ, ಸೂಚನೆಗಳನ್ನು ತುರ್ತಾಗಿ ಅಳವಡಿಸಲು ಕ್ರಮವನ್ನು ಈಗಾಗಲೇ ಕೈಗೊಳ್ಳಲಾಗಿದೆ. ಡೇಟಾ ಎಂಟ್ರಿಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳಿದ್ದಲ್ಲಿ ಅದರ ವಿವರವನ್ನು ಸಂಕ್ಷಿಪ್ತವಾಗಿ **sadpiegov@gmail.com** ಈ ಇ-ಮೇಲ್ ವಿಳಾಸಕ್ಕೆ ಕಳುಹಿಸುವುದು.

ದಿನಾಂಕ:08-06-2017ರ ಒಳಗಾಗಿ ತಮ್ಮ ಜಿಲ್ಲೆಗೆ ಸಂಬಂಧಿಸಿದ ಸಂಬಳ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳು (D.D.O's) ಮುಖ್ಯ ಶಿಕ್ಷಕರು/ಕ್ಷೇತ್ರಶಿಕ್ಷಣಾಧಿಕಾರಿಗಳು ಶಿಕ್ಷಕರಿಂದ ಸಂಗ್ರಹಿಸಿದ ನಮೂನೆಗಳಲ್ಲಿನ ಶಿಕ್ಷಕರ ಮಾಹಿತಿಗಳನ್ನು ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು. ಈ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.
2. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.

ಪ್ರತಿಯನ್ನು :

1. ನಿರ್ದೇಶಕರು. ಎಸ್.ಎಸ್.ಎ./ ಆರ್.ಎಂ.ಎಸ್.ಎ ಬೆಂಗಳೂರು ಇವರಿಗೆ ಮಾಹಿತಿಗಾಗಿ,
2. ಸಹನಿರ್ದೇಶಕರು, ಆಡಳಿತ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ,
3. ಕಛೇರಿ ಪ್ರತಿ.